# ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಾರ್ಯಾಲಯ ಕಲಬುರಗಿ

ಪತ್ರ ಸಂಖ್ಯೆ:ಸಿ1(1)/ಆಡಳಿತ/ಪ್ರಾ.ಶಾ.ಶಿ/ವರ್ಗಾವಣೆ/84/2020-21 ದಿನಾಂಕ:12/07/2021

ಇವರಿಗೆ,
ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು
ಅಫಜಲಪೂರ, ಆಳಂದ, ಚಿಂಚೋಳಿ, ಚಿತ್ತಾಪೂರ
ಜೇವರ್ಗಿ, ಕಲಬುರಗಿ(ಉ.ವ) ಕಲಬುರಗಿ(ದ.ವ), ಸೇಡಂ

ವಿಷಯ:- ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಸಹ ಶಿಕ್ಷಕರು/ಮುಖ್ಯಶಿಕ್ಷಕರುಗಳ ಖಾಲಿ ಹುದ್ದೆಗಳನ್ನು ಪ್ರಕಟಿಸುವ ಕುರಿತು.

ಉಲ್ಲೇಖ:- 1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಆದ್ಯಾದೇಶ 2021ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣಾ) (ತಿದ್ದುಪಡಿ) ಅಧಿನಿಯಮ 2020ರ ಅಧಿಸೂಚನೆ ಸಂವ್ಯಶಾಇ 12 ಶಾಸನ 2021 ದಿ:29-04-2021 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣಾ) ಅಧಿನಿಯಮ 2020ರ ಅಧಿಸೂಚನೆ ಸಂವ್ಯಶಾಇ 12 ಶಾಸನ 2020 ದಿನಾಂಕ:27/03/2020

2) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮ 2021 ದಿನಾಂಖ:25/06//2021 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣಾ)ನಿಯಮಗಳು 2020 ದಿನಾಂಕ:22/07/2020 (ಅಧಿಸೂಚನೆ ಇಪಿ 08 ಇಟಿಆರ್ 2020 ದಿನಾಂಕ:22/07/2020)

3) ಮಾನ್ಯ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ:ಶಿ.ವ.ಕೋಶ 19-20 ಕ.ವಿಶೇಷ ಕೌ.ಅ/01/2021-22 ದಿನಾಂಕ:29-06-2021

&&&&&&&

2019-20ನೇ ಸಾಲಿನ ಸಾಮಾನ್ಯ ವರ್ಗಾವಣೆಗಳಲ್ಲಿನ ಕಡ್ಡಾಯ ವರ್ಗಾವಣೆ ವಲಯ ವರ್ಗಾವಣೆಯ ಮೇಲೆ ಅಥವಾ ಸಮರ್ಪಕ ಮರುಹಂಚಿಕೆಯ ಮೇರೆಗೆ ಪ್ರಾಥಮಿಕ ಶಾಲಾ ಶಿಕ್ಷಕನ ಸಂಧರ್ಭದಲ್ಲಿ ತಾಲೂಕಿನ ಹೊರಗೆ ಅಥವಾ ಪ್ರೌಢಶಾಲಾ ಶಿಕ್ಷಕನ ಸಂದರ್ಭದಲ್ಲಿ ಜಿಲ್ಲೆಯ ಹೊರಗೆ ವರ್ಗಾವಣೆಗೊಂಡ ಶಿಕ್ಷಕನ ಸಂದರ್ಭದಲ್ಲಿ ವರ್ಗಾವಣೆ ಪೂರ್ವದಲ್ಲಿ ಎಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೂ ಆ ಸಂಬಂಧಪಟ್ಟ ತಾಲೂಕು ಅಥವಾ ಜಿಲ್ಲೆಯೊಳಗೆ ಸ್ಥಳನಿಯುಕ್ತಿ ಪ್ರಯೋಜನವನ್ನು ನೀಡುವುದಕ್ಕೆ ಖಾಲಿ ಹುದ್ದೆ ಲಭ್ಯತೆಗೆ ಒಳಪಟ್ಟು ಸ್ಥಳ ಆಯ್ಕೆ ಮಾಡಿಕೊಳ್ಳಲು ಒಂದು ಸಲದ ಕ್ರಮವಾಗಿ ವಿಶೇಷ ಕೌನ್ಸಲಿಂಗ್ ಹಮ್ಮಿಕೊಂಡಿರುವ ಬಗ್ಗೆ ಅಧಿಸೂಚನೆ ಹೊರಡಿಸುವ ಬಗ್ಗೆ.

2019-20ನೇ ಸಾಲಿನ ಶಿಕ್ಷಕರ ಸಾಮಾನ್ಯ ವರ್ಗಾವಣೆಯ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮಗಳು 2017ರ ಶಿಕ್ಷಕರ ವರ್ಗಾವಣೆ ಕಾಯ್ದೆಯ ಸೆಕ್ಷನ್ 3(ಎ) ಮತ್ತು ಸದರಿ ವರ್ಗಾವಣೆ ನಿಮಗಳ ನಿಯಮ 6(3) ಅಡಿಯಲ್ಲಿ ವರ್ಗಾವಣೆ ಪ್ರಕರಣಗಳಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರು ತಾಲೂಕಿನಿಂದ ಹೊರಗೆ ಹಾಗೂ ಕೆಲವು ಪ್ರೌಢ ಶಾಲಾ ಶಿಕ್ಷಕರು ಜಿಲ್ಲೆಯಿಂದ ಹೊರಗಡೆ ಸ್ಥಳ ನಿಯುಕ್ತಿಗೊಂಡಿದ್ದು ಭಾಧಿತರಾಗಿರುತ್ತಾರೆ.

ಪು.ತಿ.ಓ____..

2019-20ನೇ ಸಾಲಿನಲ್ಲಿ ವರ್ಗಾವಣೆಗಳಲ್ಲಿ ಮೇಲಿನಂತೆ ಕಡ್ಡಾಯ ವರ್ಗಾವಣೆ /ವಲಯ ವರ್ಗಾವಣೆಯ ಮೇಲೆ ಅಥವಾ ಸಮರ್ಪಕ ಮರುಹಂಚಿಕೆ ಮೇರೆಗೆ ಪ್ರಾಥಮಿಕ ಶಾಲಾ ಶಿಕ್ಷಕನ ಸಂದರ್ಭದಲ್ಲಿ ತಾಲೂಕಿನ ಹೊರಗೆ ಅಥವಾ ಪ್ರೌಢ ಶಾಲಾ ಶಿಕ್ಷಕನ ಸಂದರ್ಭದಲ್ಲಿ ಜಿಲ್ಲೆಯ ಹೊರಗೆ ವರ್ಗಾವಣೆಗೊಂಡ ಶಿಕ್ಷಕನ ಸಂಬಂಧದಲ್ಲಿ ವರ್ಗಾವಣೆ ಪೂರ್ವದಲ್ಲಿ ಎಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೂ ಆ ಸಂಬಂಧಪಟ್ಟ ತಾಲೂಕು ಅಥವಾ ಜಿಲ್ಲೆಯೊಳಗೆ ಸ್ಥಳನಿಯುಕ್ತಿ ಪ್ರಯೋಜನವನ್ನು ನೀಡುವುದಕ್ಕೆ ಒಂದು ಸಲದ ಕ್ರಮವಾಗಿ ಖಾಲಿ ಹುದ್ದೆ ಲಭ್ಯತೆಗೆ ಒಳಪಟ್ಟು ಕರ್ನಾಟಕ ರಾಜ್ಯ ಸಿವಿಲ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣಾ) (ತಿದ್ದುಪಡಿ) ಆದ್ಯಾದೇಶ 2021 ಹಾಗೂ ಕರ್ನಾಟಕ ರಾಜ್ಯ ಸಿವಿಲ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮ 2021ರಲ್ಲಿನ ಅವಕಾಶಗಳನ್ವಯ ವಿಶೇಷ ಕೌನ್ಸಲಿಂಗ್ ಹಮ್ಮಿಕೊಂಡಿರುವ ಬಗ್ಗೆ ಈಗಾಗಲೇ ವೇಳಾ ಪಟ್ಟಿಯಂತೆ ಕ್ರಮವಹಿಸಲು ಸೂಚಿಸಿದೆ. ಅದರಂತೆ ಖಾಲಿ ಹುದ್ದೆಗಳನ್ನು ಇಲಾಖಾ ವೆಬ್ ಸೈಟನಲ್ಲಿ ಪ್ರಕಟಿಸಲಾಗಿದೆ. ಸದರಿ ಖಾಲಿ ಹುದ್ದೆಗಳನ್ನು ತಮ್ಮ ತಮ್ಮ ಕಛೇರಿ ಸೂಚನಾ ಫಲಕದ್ದಲ್ಲಿ ಪ್ರಕಟಿಸಲು ಸೂಚಿಸಿದೆ.

ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ

ಪ್ರತಿಯನ್ನು
1] ಈ ಕಛೇರಿಯ ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಿದೆ.